ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಹುಕ್ಕೇರಿ

ಓಎಸ್ ನಂ. **16-2017**

**ಸಿಡಬ್ಲು ಃ 1**

ಹೆಸರು ಃ

ವಯಾ ಃ 51 ವರ್ಷ

ಉದ್ಯೋಗ ಃ

ವಾಸ ಃ ಗೋಕಾಕ

(ದಿನಾಂಕಃ 07-02-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆ ಸಸಅಃರವರಿಂದಃ

ನಾನು 2016 ರಿಂದ 2012 ರವರಗೆ ಹುಕ್ಕೇರಿ ಪೋಲಿಸ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 27-09-2018 ರಂದು ನಾನು ಹುಕ್ಕೇರಿಯ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ಕೊಟ್ಟು ಚಾಸಾ.1 ಶಂಕರ ಪಾಟೀಲರವರ ವಿಚಾರಣೆ ಮಾಡಿ ಹೇಳಿಕೆ ದೂರನ್ನು ಪಡೆದಿರುತ್ತೇನೆ. ಮರಳಿ ಠಾಣೆಗೆ ಬಂದು 20.15 ಗಂಟೆಗೆ ಠಾಣಾ ಕ್ರೈಮ ನಂ. 165/2018 ರಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಯವರಿಗೆ ರವಾನಿಸಿರುತ್ತೇನೆ.

ನಂತರ ದಿಃ 28-09-2018 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿರುತ್ತೇನೆ. ಅದೇ ದಿನ ಚಾಸಾ.4 ರಿಂದ 7 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ದಿಃ 06-10-2018 ರಂದು ಆರೋಪಿತನನ್ನು ದಸ್ತಗಿರಿ ಕ್ರಮ ಅನುಸರಿಸಿ ಸೂಕ್ತ ಜಾಮೀನು ಪಡೆದು ಬಿಡುಗಡೆ ಗೊಳಿಸಿರುತ್ತೇನೆ.

ದಿಃ 09-10-2018 ರಂದು ಪಿರ್ಯಾದಿ ಠಾಣೆಗೆ ಬಂದಿದ್ದು ಆತನ ಪುನಃಹೇಳಿಕೆ ಪಡೆದಿರುತ್ತೇನೆ. ನಂತರ ಆತನನ್ನು ಘಟನಾ ಸ್ಥಳಕ್ಕೆ ಕರೆದುಕೊಂಡು ಹೋಗಿ ಪಂಚನಾಮೆ ಮಾಡಿ ಕಚ್ಚಾನಕಾಶೆ ತಯಾರಿಸಿ ಪೋಟೋ ತೆಗೆಸಿರುತ್ತೇನೆ. ಚಾಸಾ.1 ರವರು ಹಾಜರುಪಡಿಸಿದ ಕಟ್ಟಿಗೆಯನ್ನು ಜಪ್ತಿ ಮಾಡಿರುತ್ತೇನೆ. ಅದೇ ದಿನ ಮಾನ್ಯ ಪಿಎಫ್ ತುಂಬಿ ನ್ಯಾಯಾಲಯದ ಅನುಮತಿ ಪಡೆದಿರುತ್ತೇನೆ.

ದಿಃ 20-02-2019 ರಂದು ಗಾಯದ ಪ್ರಮಾಣಪತ್ರವನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ತನಿಖೆ ಪೂರ್ಗೊಳಿಸಿ ಆರೋಪಿಯ ವಿರುದ್ಧ ಅಂತಿಮ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು , ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು

ಪಂಚನಾಮೆಯನ್ನು ನೋಡಿ ಗುರುತಿಸಿದ್ದು , ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾನಕಾಶೆ ನೋಡಿ ಗುರುತಿಸಿದ್ದು , ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಪೋಟೋವನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದೆ. ಸಾಕ್ಷಿಯು ಗಾಯದ ಪ್ರಮಾಣಪತ್ರವನ್ನು ನೋಡಿ ಗುರುತಿಸಿದ್ದು , ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು , ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಬಡಿಗೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಮು.ಮಾ.1 ಎಂದು ಗುರುತಿಸಲಾಗಿದೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿತನನ್ನು ನೋಡಿ ಗುರುತಿಸಿರುತ್ತಾರೆ.

ಪಾಟಿ ಸವಾಲುಃ ಶ್ರೀ ಪಿ ಎ ಪಿ ಆರೋಪಿ ಪರ ವಕೀಲರಿಂದ -

ಚಾಸಾ.1 ನಮ್ಮ ಮೇಲಾಧಿಕಾರಿಗಳು ಎಂದರೆ ಸರಿ . ದಾಳಿ ಸಿಬ್ಬಂದಿಯವರು ನಮ್ಮ ಕೆಳಗಿನ ಅಧಿಕಾರಿಗಳು ಎಂದರೆ ಸರಿ . ಪಿ ಎಸ್ ಐರವರು ಕೊಟ್ಟಂತಹ ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆ ಪಡೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಅನುಕೂಲವಾಗುವಂತೆ ದಾಖಲೆಗಳನ್ನು ಪೂರೈಸಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ನಮ್ಮ ತನಿಖೆಯಿಂದ ಆರೋಪಿಯ ತಪ್ಪು ಕಂಡು ಬರದಿದ್ದರೂ ಸಹ ಅಂತಿಮ ವರದಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೆ ಕೇ ಸರಿ ಅದೇ

ಸಿ ಜೆ & ಜೆ ಎಂ ಎಫ್ ಸಿ ಹುಕ್ಕೇರಿ